# ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಶ್ರೀ ಮೌಲಸಾಬ್, ಹಿಂದಿನ (ನಿವೃತ್ತ) ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಶಿರವಾಳ ಗ್ರಾಮ ಪಂಚಾಯಿತಿ, ಶಹಾಪೂರ ತಾಲ್ಲೂಕು, ಯಾದಗಿರಿ ಜಿಲ್ಲೆ ಹಾಗೂ ಶ್ರೀ ಪ್ರಭು ಎಸ್. ಗದಗಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಶಿರವಾಳ ಗ್ರಾಮ ಪಂಚಾಯಿತಿ, ಶಹಾಪೂರ ತಾಲ್ಲೂಕು, ಯಾದಗಿರಿ ಜಿಲ್ಲೆ, ಇವರ ವಿರುದ್ಧ ನಡೆಸಲಾದ ಇಲಾಖಾ ವಿಚಾರಣೆ-ಅಂತಿಮ ಆದೇಶ ಹೊರಡಿಸುವ ಬಗ್ಗೆ-ಆದೇಶ.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/431/ಗ್ರಾಪಂಕಾ/2016 ದಿನಾಂಕ:24.08.2016.
2. ನಿಬಂಧಕರು, ಕರ್ನಾಟಕ ಲೋಕಾಯುಕ್ತ ಬೆಂಗಳೂರು ಇವರು ಮಾನ್ಯ ಉಪಲೋಕಾಯುಕ್ತರಿಗೆ ಸಲ್ಲಿಸಿದ ವಿಚಾರಣಾ ವರದಿ ಸಂಖ್ಯೆ: Uplok-1/DE/338/2016/ARE-10 Date:16.03.2017.
3. ಮಾನ್ಯ ಉಪಲೋಕಾಯುಕ್ತರು ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಶಿಫಾರಸ್ಸು ಸಂಖ್ಯೆ Uplok-1/DE/338/2016/ARE-10 Date:03.04.2017.
4. ಸರ್ಕಾರದ ಎರಡನೇ ಕಾರಣ ಕೇಳುವ ನೋಟೀಸ್ ಸಂಖ್ಯೆ: ಗ್ರಾಅಪ/316/ಗ್ರಾಪಂಕಾ/2017 ದಿನಾಂಕ:08.05.2017.
5. ಶ್ರೀ ಪ್ರಭು ಎಸ್. ಗದಗಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಇವರು ಸರ್ಕಾರದ ಎರಡನೇ ಕಾರಣ ಕೇಳುವ ನೋಟೀಸ್‌ಗೆ ನೀಡಿರುವ ಲಿಖಿತ ಹೇಳಿಕೆ ದಿನಾಂಕ: 01.07.2017.
6. ಶ್ರೀ ಮೌಲಸಾಬ್, ಹಿಂದಿನ (ನಿವೃತ್ತ) ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಇವರು ಸರ್ಕಾರದ ಎರಡನೇ ಕಾರಣ ಕೇಳುವ ನೋಟೀಸ್‌ಗೆ ನೀಡಿರುವ ಲಿಖಿತ ಹೇಳಿಕೆ ದಿನಾಂಕ: 06.07.2017.

**ಪ್ರಸ್ತಾವನೆ :**

ಮೇಲೆ ಕ್ರಮ ಸಂಖ್ಯೆ: (1) ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಶ್ರೀ ಮೌಲಸಾಬ್, ಹಿಂದಿನ (ನಿವೃತ್ತ) ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಶಿರವಾಳ ಗ್ರಾಮ ಪಂಚಾಯಿತಿ, ಶಹಾಪೂರ ತಾಲ್ಲೂಕು, ಯಾದಗಿರಿ ಜಿಲ್ಲೆ ಹಾಗೂ ಶ್ರೀ ಪ್ರಭು ಎಸ್. ಗದಗಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಶಿರವಾಳ ಗ್ರಾಮ ಪಂಚಾಯಿತಿ, ಶಹಾಪೂರ ತಾಲ್ಲೂಕು, ಯಾದಗಿರಿ ಜಿಲ್ಲೆ, ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 14-ಎ ಅಡಿಯಲ್ಲಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲಾಗಿತ್ತು. ಅದರಂತೆ ನಿಬಂಧಕರು ವಿಚಾರಣೆಗಳು-10, ಕರ್ನಾಟಕ ಲೋಕಾಯುಕ್ತ ಇವರು ಸದರಿಯವರ ವಿರುದ್ಧ ಈ ಕೆಳಕಂಡ ಆರೋಪದ ಮೇಲೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 11ರ ಅಡಿಯಲ್ಲಿ ಇಲಾಖಾ ವಿಚಾರಣೆ ನಡೆಸಿರುತ್ತಾರೆ.

**"ದೋಷಾರೋಪಣೆ"**

"That you- DGO 1- Sri Moulasab, Panchayath Development Officer and you DGO 2- Sri Prabhu S. Gadagi, Panchayath Development Officer, both working at Srirawala Grama Panchayath, Shahapur Taluk, Yadgir District, have not included the programmer for physically challenged persons in the action plan and not spent 3% of grtants allotted to Grama Panchayath towards the scheme during the year 2010-11 to 2012-13 and not ascertained and given facilities to physically challenged persons. Thereby you DGOs 1 and 2 being Government/Public Servants have failed to

maintain absolute integrity, besides devotion to duty and acted in a manner unbecoming of Government Servants and thus committed misconduct as enumerated U/R. 3(1) of Karnataka Civil Service (Conduct) Rules, 1966."

ವಿಚಾರಣಾಧಿಕಾರಿಗಳು ಮೇಲೆ ಕ್ರಮ ಸಂಖ್ಯೆ (2) ರಲ್ಲಿ ಓದಲಾದ ವರದಿಯಲ್ಲಿ ಶ್ರೀ ಮೌಲಸಾಬ್, ಹಿಂದಿನ (ನಿವೃತ್ತ) ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಶಿರವಾಳ ಗ್ರಾಮ ಪಂಚಾಯಿತಿ, ಹಾಗೂ ಶ್ರೀ ಪ್ರಭು ಎಸ್. ಗದಗಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಶಿರವಾಳ ಗ್ರಾಮ ಪಂಚಾಯಿತಿ, ಇವರ ವಿರುದ್ಧದ ಆರೋಪವು ಸಾಬೀತಾಗಿದೆಯೆಂದು ನಿರ್ಣಯಿಸಿರುತ್ತಾರೆ.

ಉಪಲೋಕಾಯುಕ್ತರು ಮೇಲೆ ಕ್ರಮ ಸಂಖ್ಯೆ (3) ರಲ್ಲಿ ಓದಲಾದ ವರದಿಯಲ್ಲಿ, ಶ್ರೀ ಮೌಲಸಾಬ್, ಹಿಂದಿನ (ನಿವೃತ್ತ) ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಹಾಗೂ ಶ್ರೀ ಪ್ರಭು ಎಸ್. ಗದಗಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ರವರು ಶಿರವಾಳ ಗ್ರಾಮ ಪಂಚಾಯಿತಿಯಲ್ಲಿ ಕರ್ತವ್ಯ ನಿರ್ವಹಿಸಿದ ಅವಧಿ 2010-11 ರಿಂದ 2012-13 ನೇ ಸಾಲಿನ ಕ್ರಿಯಾ ಯೋಜನೆಗಳನ್ನು ಸಿದ್ಧಪಡಿಸುವಾಗ ವಿಕಲಚೇತನರಿಗೆ ಒದಗಿಸಿದ್ದ 3% ರಷ್ಟರ ಅನುದಾನವನ್ನು ಕ್ರಿಯಾ ಯೋಜನೆಯಲ್ಲಿ ಸೇರಿಸಿಕೊಳ್ಳದೆ ಹಾಗೂ ವಿಕಲಚೇತನರಿಗಾಗಿ ಸರ್ಕಾರ ಒದಗಿಸುವ ಸೌಲಭ್ಯಗಳ ಬಗ್ಗೆ ತಿಳಿದುಕೊಳ್ಳದೆ ಕರ್ತವ್ಯಲೋಪವೆಸಗಿರುವುದು ಸಾಬೀತಾಗಿರುವುದರಿಂದ ಇವರಿಗೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮ 1957 ರ ನಿಯಮ 8(iii) ರ ನಿಯಮದಡಿ ನಿರ್ಧಿಷ್ಟಪಡಿಸಿದಂತೆ ಶ್ರೀ ಮೌಲಸಾಬ್, ಹಿಂದಿನ (ನಿವೃತ್ತ) ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಶಿರವಾಳ ಗ್ರಾಮ ಪಂಚಾಯಿತಿ, ಶಹಾಪೂರ ತಾಲ್ಲೂಕು, ಯಾದಗಿರಿ ಜಿಲ್ಲೆ, ರವರಿಗೆ ನಿವೃತ್ತಿ ವೇತನದ 5% ರಷ್ಟನ್ನು 10 ವರ್ಷಗಳ ಅವಧಿಗೆ ತಡೆಯಿಡಿಯಲು ಹಾಗೂ ಶ್ರೀ ಪ್ರಭು ಎಸ್. ಗದಗಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಶಿರವಾಳ ಗ್ರಾಮ ಪಂಚಾಯಿತಿ, ಶಹಾಪೂರ ತಾಲ್ಲೂಕು, ಯಾದಗಿರಿ ಜಿಲ್ಲೆ, ರವರಿಗೆ 2 ವಾರ್ಷಿಕ ವೇತನ ಬಡ್ತಿಯನ್ನು ಸಂಚಿತ ಸಹಿತವಾಗಿ ತಡೆಯಿಡಿಯುವ ಶಿಕ್ಷೆಯನ್ನು ವಿಧಿಸುವ ದಂಡನೆಯನ್ನು ವಿಧಿಸಲು ಶಿಫಾರಸ್ಸು ಮಾಡಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (4) ರಲ್ಲಿ, ಈ ಸಂಬಂಧ ಶ್ರೀ ಮೌಲಸಾಬ್, ಹಿಂದಿನ (ನಿವೃತ್ತ) ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಹಾಗೂ ಶ್ರೀ ಪ್ರಭು ಎಸ್. ಗದಗಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ರವರಿಗೆ ನಿಯಮಾನುಸಾರ ಸರ್ಕಾರದ ಪತ್ರದಲ್ಲಿ ವಿಚಾರಣಾಧಿಕಾರಿಯವರ ವರದಿ ಮತ್ತು ಮಾನ್ಯ ಉಪಲೋಕಾಯುಕ್ತರ ಶಿಫಾರಸ್ಸಿನ ಪ್ರತಿಯೊಂದಿಗೆ ಎರಡನೇ ಕಾರಣ ಕೇಳುವ ನೋಟೀಸ್ಸನ್ನು ಜಾರಿಗೊಳಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (5) ರಲ್ಲಿ, ಎರಡನೇ ಕಾರಣ ಕೇಳುವ ನೋಟೀಸ್ಸಿಗೆ, ಶ್ರೀ ಪ್ರಭು ಎಸ್. ಗದಗಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಅವರು ತಮ್ಮ ಲಿಖಿತ ಹೇಳಿಕೆಯನ್ನು ಸಲ್ಲಿಸಿದ್ದು ಈ ಕೆಳಕಂಡಂತೆ ಆಕ್ಷೇಪಣೆಯನ್ನು ಸಲ್ಲಿಸಿರುತ್ತಾರೆ.

ಸದರಿಯವರು ದಿನಾಂಕ:04.02.2012 ರಿಂದ 31.03.2013 ರವರೆಗೆ ಗ್ರಾಮ ಪಂಚಾಯಿತಿ ಶಿರವಾಳ, ಶಹಪೂರ ತಾಲ್ಲೂಕು, ಯಾದಗಿರಿ ಜಿಲ್ಲೆ, ಇಲ್ಲಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಆಗಿ ಕರ್ತವ್ಯ ನಿರ್ವಹಿಸುತ್ತಿದ್ದಾಗ, 2010-11 ರಿಂದ 2012-13 ರವರೆಗೆ ಯೋಜನೆಗಳಲ್ಲಿ ಶೇ.3 ರಷ್ಟು ಅನುದಾನವನ್ನು ವಿಕಲಚೇತನರ ಕಲ್ಯಾಣಕ್ಕಾಗಿ ಹಣ ಮೀಸಲಿಡುವ ಬಗ್ಗೆ ಕಾಲ-ಕಾಲಕ್ಕೆ ಮಾರ್ಪಡಾಗುವ ಸರ್ಕಾರಿ ಆದೇಶಗಳು ಅವರ ಗಮನಕ್ಕೆ ಬರದೇ ಇರುವುದರಿಂದ ಮತ್ತು ತಲುಪದೆ ಇರುವುದರಿಂದ ಸದರಿ ಆರ್ಥಿಕ ವರ್ಷಗಳಲ್ಲಿ ವಿಕಲಚೇತನರಿಂದ ಯಾವುದೇ ತರಹದ ಬೇಡಿಕೆ ಪ್ರಸ್ತಾವನೆಗಳು ಗ್ರಾಮ ಪಂಚಾಯಿತಿಗೆ ಬಾರದಿರುವುದು ಕೂಡಾ ಹಣ ಮೀಸಲಿಡದಿರಲು ಕಾರಣವಾಗಿರುತ್ತದೆಂದು ತಿಳಿಸಿರುತ್ತಾರೆ. ಅಲ್ಲದೆ ಯೋಜನೆಗಳನ್ನು ಸಿದ್ಧಪಡಿಸುವಾಗ ಗ್ರಾಮ ಪಂಚಾಯಿತಿ ಸಾಮಾನ್ಯ ಸಭೆಯಲ್ಲಿ ವಿಕಲಚೇತನರ ಬೇಡಿಕೆ ಬಾರದೆ ಇರುವುದರಿಂದ ಯಾವುದೇ ಪ್ರಸ್ತಾಪ ಸಭೆಯು ತೆಗೆದುಕೊಂಡಿರುವುದಿಲ್ಲ. ಗ್ರಾಮೀಣ ಮಟ್ಟದಲ್ಲಿ ಗ್ರಾಮ ಪಂಚಾಯಿತಿ ಸಾಮಾನ್ಯ ಸಭೆಯ ನಡಾವಳಿಯ ಪ್ರಕಾರ ಸಭೆಯ ಒಪ್ಪಿಗೆಯಂತೆ ಸರ್ಕಾರದಿಂದ ಬಂದ ಯೋಜನಾವಾರು ಅನುದಾನಗಳ ಕ್ರಿಯಾಯೋಜನೆ ಸಿದ್ಧಪಡಿಸಿ ಸಭೆಯ ಅಂಗಿಕಾರ ಪಡೆದು ಸಿದ್ಧಪಡಿಸಿದ ಕ್ರಿಯಾ ಯೋಜನೆಗಳನ್ನು ಸಂಬಂಧಪಟ್ಟ ಮೇಲಾಧಿಕಾರಿಗಳಾದ ಮಾನ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ತಾಲ್ಲೂಕು ಪಂಚಾಯಿತಿ ಶಹಾಪೂರ ಇವರಿಂದ ಕ್ರಿಯಾಯೋಜನೆಗೆ ಅನುಮೋದನೆ ಪಡೆದು ಅದರಂತೆ ಕೆಲಸ ನಿರ್ವಹಿಸಲಾಗಿದೆಂದು ತಿಳಿಸಿರುತ್ತಾರೆ.

ಅಲ್ಲದೇ ವಸತಿ ಯೋಜನೆಗಳಲ್ಲಿ ಫಲಾನುಭವಿಗಳ ಆಯ್ಕೆ ಮಾಡುವಾಗ ಗ್ರಾಮ ಸಭೆಗಳಲ್ಲಿ ಬಂದಂತಹ ವಿಕಲಚೇತನರ ಬೇಡಿಕೆಯನ್ನಾಧರಿಸಿ ವಿಕಲಚೇತನರಿಗೆ ಮನೆಗಳನ್ನು ಒದಗಿಸಲಾಗಿದೆಂದು ಹಾಗೂ ದಾಖಲಾತಿಗಳ ಸಮೇತ ವಿವರಣೆಯನ್ನು ಕರ್ನಾಟಕ ಲೋಕಾಯುಕ್ತ ರವರಿಗೆ ವಿಚಾರಣಾ ಸಂದರ್ಭದಲ್ಲಿ ಸಲ್ಲಿಸಲಾಗಿದೆಂದು ತಿಳಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (6) ರಲ್ಲಿ, ಎರಡನೇ ಕಾರಣ ಕೇಳುವ ನೋಟೀಸ್ಸಿಗೆ, ಶ್ರೀ ಮೌಲಸಾಬ್, ಹಿಂದಿನ (ನಿವೃತ್ತ) ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಅವರು ತಮ್ಮ ಲಿಖಿತ ಹೇಳಿಕೆಯನ್ನು ಸಲ್ಲಿಸಿದ್ದು ಈ ಕೆಳಕಂಡಂತೆ ಆಕ್ಷೇಪಣೆಯನ್ನು ಸಲ್ಲಿಸಿರುತ್ತಾರೆ.

ಸರ್ಕಾರದ ಆದೇಶದಂತೆ ದಿನಾಂಕ:17.07.2010 ರಂದು ಶಿರವಾಳ ಗ್ರಾಮ ಪಂಚಾಯಿತಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಹುದ್ದೆಗೆ ಕರ್ತವ್ಯದ ಮೇಲೆ ಹಾಜರಾಗಿ ದಿನಾಂಕ:03.02.2012 ರವರೆಗೆ ಕರ್ತವ್ಯ ನಿರ್ವಹಿಸಿ ಮುಂಬಡ್ತಿ ಹೊಂದಿ ತಾಲ್ಲೂಕು ಪಂಚಾಯಿತಿ ಶಹಾಪೂರ ರವರ ಆದೇಶದಂತೆ ಪ್ರಭು ಎಸ್ ಗಡಗಿ ಯವರಿಗೆ ಗ್ರಾಮ ಪಂಚಾಯಿತಿ ಹಣಕಾಸು ವ್ಯವಹಾರದ ದಾಖಲೆ ಇತರೆ ದಾಖಲೆಗಳ ಪ್ರಭಾರ ವಹಿಸಿ ದಿನಾಂಕ:03.02.2012 ರಂದು ಕರ್ತವ್ಯದಿಂದ ಬಿಡುಗಡೆ ಹೊಂದಿರುವುದಾಗಿ ತಿಳಿಸಿರುತ್ತಾರೆ.

ಸದರಿ ಅವಧಿಯಲ್ಲಿ ವಿಕಲಚೇತನರ ಸೌಲಭ್ಯ ಒದಗಿಸಲು ಕೋರಿ ಯಾವುದೇ ಅರ್ಜಿ ಬಂದಿರುವುದಿಲ್ಲ ಹಾಗೂ ತಾವು ತಿರಸ್ಕರಿಸಿರುವುದಿಲ್ಲವೆಂದು ಸರ್ಕಾರ ವಿವಿಧ ವಸತಿ ಯೋಜನೆ ಅಡಿಯಲ್ಲಿ ಕೋರಿಕೆ ಸಲ್ಲಿಸಿದ ವಿಕಲಚೇತನರಿಗೆ ವಸತಿ ಸೌಲಭ್ಯ ಒದಗಿಸಲಾಗಿದ್ದು, ಸರ್ಕಾರದ ಮಾರ್ಗ ಸೂಚಿಯಂತೆ 2010-11 ಹಾಗೂ 2011-12 ನೇ ಸಾಲಿನ ಗ್ರಾಮ ಪಂಚಾಯಿತಿ ವಿವಿಧ ಅಭಿವೃದ್ಧಿಗೆ ಬಿಡುಗಡೆಯಾದ ಹಣಕ್ಕೆ, ವಾರ್ಡ್ ಸಭೆ, ಗ್ರಾಮ ಸಭೆ ಜರುಗಿಸಿ ಸಾರ್ವಜನಿಕರ ಸೌಲಭ್ಯ ಕೋರಿ ಕ್ರಿಯಾ ಯೋಜನೆ ಸಿದ್ಧಪಡಿಸಿ, ಸಾಮಾನ್ಯ ಸಭೆ ಅನುಮೋದನೆ ಹಾಗೂ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅನುಮೋದನೆ ಪಡೆದು ಕಾರ್ಯಾಚರಣೆ ಗೊಳಿಸಲಾಗಿದೆಂದು ತಿಳಿಸಿರುತ್ತಾರೆ.

ಸದರಿ ಅವಧಿಯಲ್ಲಾಗಲಿ ಅದಕ್ಕಿಂತ ಮುಂಚಿತವಾಗಿಯೂ ವಿಕಲಚೇತನರಿಗೆ ಮೀಸಲಾತಿ ಅನುದಾನದಂತೆ ಸೌಲಭ್ಯ ಒದಗಿಸಲು ವಿಕಲಚೇತನ ಫಲಾನುಭವಿಗಳಿಂದಾಗಲಿ ವಿಕಲಚೇತನ ರಕ್ಷಣಾ ಸಮಿತಿಯಿಂದಾಗಲಿ ಕಾಮಗಾರಿ ಕೋರಿಕೆದಾರರಿಂದ ಕ್ರಿಯಾ ಯೋಜನೆಯಲ್ಲಿ ಆಳವಡಿಸಿ ಅನುಮೋದನೆ ಪಡೆದು ಬೇರೆ ಕಡೆ ಖರ್ಚು ಮಾಡಿ ದುರ್ಬಳಕೆ ಮಾಡಿರುವುದಿಲ್ಲ ಹಾಗೂ ದಾಖಲಾತಿಗಳ ಸಮೇತ ವಿವರಣೆಯನ್ನು ಕರ್ನಾಟಕ ಲೋಕಾಯುಕ್ತ ರವರಿಗೆ ವಿಚಾರಣಾ ಸಂದರ್ಭದಲ್ಲಿ ತಿಳಿಸಿರುವುದಾಗಿ ತಿಳಿಸಿರುತ್ತಾರೆ.

ಸದರಿಯವರುಗಳು ಸರ್ಕಾರಕ್ಕೆ ಸಲ್ಲಿಸಿರುವ ಲಿಖಿತ ಹೇಳಿಕೆಯನ್ನು ಒಪ್ಪಲು ಬರುವುದಿಲ್ಲವಾಗಿರುತ್ತದೆ. ಸರ್ಕಾರವು ಎಲ್ಲಾ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಲಾಗಿದ್ದು, ಶ್ರೀ ಮೌಲಸಾಬ್, ಹಿಂದಿನ (ನಿವೃತ್ತ) ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಶಿರವಾಳ ಗ್ರಾಮ ಪಂಚಾಯಿತಿ, ಹಾಗೂ ಶ್ರೀ ಪ್ರಭು ಎಸ್. ಗದಗಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಶಿರವಾಳ ಗ್ರಾಮ ಪಂಚಾಯಿತಿ, ಇವರು 2ನೇ ಕಾರಣ ಕೇಳುವ ನೋಟೀಸ್ಸಿಗೆ ನೀಡಿರುವ ಹೇಳಿಕೆ ಸಮರ್ಥನೀಯವಲ್ಲವೆಂದು ಕಂಡುಬಂದಿರುವುದರಿಂದ ಸರ್ಕಾರವು ವಿಚಾರಣಾ ವರದಿ ಹಾಗೂ ಸದರಿ ವರದಿಯ ಮೇಲೆ ಮಾನ್ಯ ಉಪಲೋಕಾಯುಕ್ತರ ನಿರ್ಣಯವನ್ನು ಅಂಗೀಕರಿಸಿದೆ ಮತ್ತು ಮಾನ್ಯ ಉಪಲೋಕಾಯುಕ್ತರ ಶಿಫಾರಸ್ಸಿನಂತೆ ಶ್ರೀ ಮೌಲಸಾಬ್, ಹಿಂದಿನ (ನಿವೃತ್ತ) ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಶಿರವಾಳ ಗ್ರಾಮ ಪಂಚಾಯಿತಿ, ಶಹಾಪೂರ ತಾಲ್ಲೂಕು, ಯಾದಗಿರಿ ಜಿಲ್ಲೆ, ರವರಿಗೆ ನಿವೃತ್ತಿ ವೇತನದ 5% ರಷ್ಟನ್ನು 10 ವರ್ಷಗಳ ಅವಧಿಗೆ ತಡೆಯಿಡಿಯಲು ಹಾಗೂ ಶ್ರೀ ಪ್ರಭು ಎಸ್. ಗದಗಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಶಿರವಾಳ ಗ್ರಾಮ ಪಂಚಾಯಿತಿ, ಶಹಾಪೂರ ತಾಲ್ಲೂಕು, ಯಾದಗಿರಿ ಜಿಲ್ಲೆ, ರವರಿಗೆ 2 ವಾರ್ಷಿಕ ವೇತನ ಬಡ್ತಿಯನ್ನು ಸಂಚಿತ ಸಹಿತವಾಗಿ ತಡೆಯಿಡಿಯುವ ದಂಡನೆಯನ್ನು ವಿಧಿಸಲು ನಿರ್ಣಯಿಸಿದೆ.

ಅದರಂತೆ ಈ ಆದೇಶ.

**<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ:316:ಗ್ರಾಪಂಕಾ2017 ಬೆಂಗಳೂರು, ದಿನಾಂಕ-14-09-2017.</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಸರ್ಕಾರವು, ಶ್ರೀ ಮೌಲಸಾಬ್, ಹಿಂದಿನ (ನಿವೃತ್ತ) ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಶಿರವಾಳ ಗ್ರಾಮ ಪಂಚಾಯಿತಿ, ಶಹಾಪೂರ ತಾಲ್ಲೂಕು, ಯಾದಗಿರಿ ಜಿಲ್ಲೆ

ಹಾಗೂ ಶ್ರೀ ಪ್ರಭು ಎಸ್. ಗದಗಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಶಿರವಾಳ ಗ್ರಾಮ ಪಂಚಾಯಿತಿ, ಶಹಾಪೂರ ತಾಲ್ಲೂಕು, ಯಾದಗಿರಿ ಜಿಲ್ಲೆ, ರವರುಗಳು ಶಿರವಾಳ ಗ್ರಾಮ ಪಂಚಾಯಿತಿಯಲ್ಲಿ ಕರ್ತವ್ಯ ನಿರ್ವಹಿಸಿದ ಅವಧಿ 2010-11 ರಿಂದ 2012-13 ನೇ ಸಾಲಿನಲ್ಲಿ ಕ್ರಿಯಾ ಯೋಜನೆಗಳನ್ನು ಸಿದ್ಧಪಡಿಸುವಾಗ ವಿಕಲಚೇತನರಿಗೆ ಒದಗಿಸಿದ್ದ 3% ರಷ್ಟರ ಅನುದಾನವನ್ನು ಕ್ರಿಯಾ ಯೋಜನೆಯಲ್ಲಿ ಸೇರಿಸಿಕೊಳ್ಳದೆ ಹಾಗೂ ವಿಕಲಚೇತನರಿಗಾಗಿ ಸರ್ಕಾರ ಒದಗಿಸುವ ಸೌಲಭ್ಯಗಳ ಬಗ್ಗೆ ತಿಳಿದುಕೊಳ್ಳದೆ ಕರ್ತವ್ಯಲೋಪವೆಸಗಿರುವುದು ಸಾಬೀತಾಗಿರುವುದರಿಂದ ಶ್ರೀ ಮೌಲಸಾಬ್, ನಿವೃತ್ತ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಶಿರವಾಳ ಗ್ರಾಮ ಪಂಚಾಯಿತಿ, ಶಹಾಪೂರ ತಾಲ್ಲೂಕು, ಯಾದಗಿರಿ ಜಿಲ್ಲೆ, ರವರಿಗೆ ನಿವೃತ್ತಿ ವೇತನದ 5% ರಷ್ಟನ್ನು 10 ವರ್ಷಗಳ ಅವಧಿಗೆ ತಡೆಯಿಡಿಯುವ ಹಾಗೂ ಶ್ರೀ ಪ್ರಭು ಎಸ್. ಗದಗಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಶಿರವಾಳ ಗ್ರಾಮ ಪಂಚಾಯಿತಿ, ಶಹಾಪೂರ ತಾಲ್ಲೂಕು, ಯಾದಗಿರಿ ಜಿಲ್ಲೆ, ರವರಿಗೆ 2 ವಾರ್ಷಿಕ ವೇತನ ಬಡ್ತಿಯನ್ನು ಸಂಚಿತ ಸಹಿತವಾಗಿ ತಡೆಯಿಡಿಯುವ ದಂಡನೆ ವಿಧಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಟಿ.ವಿ. ಅರುಣ್‌ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಗೆ,**

1. ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಯಾದಗಿರಿ ಜಿಲ್ಲೆ.
5. ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತಿ, ಶಹಾಪೂರ ತಾಲ್ಲೂಕು, ಯಾದಗಿರಿ ಜಿಲ್ಲೆ.
6. ಶ್ರೀ ಮೌಲಸಾಬ್, ಹಿಂದಿನ (ನಿವೃತ್ತ) ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಶಿರವಾಳ ಗ್ರಾಮ ಪಂಚಾಯಿತಿ, ಶಹಾಪೂರ ತಾಲ್ಲೂಕು, ಯಾದಗಿರಿ ಜಿಲ್ಲೆ.
7. ಶ್ರೀ ಪ್ರಭು ಎಸ್. ಗದಗಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಶಿರವಾಳ ಗ್ರಾಮ ಪಂಚಾಯಿತಿ, ಶಹಾಪೂರ ತಾಲ್ಲೂಕು, ಯಾದಗಿರಿ ಜಿಲ್ಲೆ.
8. ಗಣಕ ಕೋಶ.
9. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.